ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು
ಸಿ.ಸಿ.ನಂ.**229/2020.**

ದಿನಾಂಕ:**13.01.2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು

| | | |
|---|---|---|
| ಸಾಕ್ಷಿಯ ಹೆಸರು | ಲೋಕೇಶ್ | ಚಾಸಾ-3, ಪ್ರಾಸಾ-6 |
| ತಂದೆಯ ಹೆಸರು | ನಂಜಪ್ಪ | |
| ವಯಸ್ಸು | 70 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸ | ಕಂಚಿಗಾರನಹಳ್ಳಿ ಗ್ರಾಮ | |

ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:

ಚಾಸಾ 2 ಗೊತ್ತಿಲ್ಲ. ಈ ಕೇಸಿನ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಈಗ ನೋಡುತ್ತಿರುವ ಮೂರು ದಾಖಲೆಗಳಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಗಳು ನೋಟೀಸು, ಸ್ಥಳ ಪಂಚನಾಮೆ ಮತ್ತು ಅಮಾನತ್ತು ಪಂಚನಾಮೆಯಾಗಿದ್ದು ಅವುಗಳನ್ನು ಈಗಾಗಲೇ ನಿಪಿ3 ರಿಂದ 5 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಗಳನ್ನು ನಿಪಿ3 ಸಿ, 4 ಸಿ, 5 ಸಿ ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ರಸ್ತೆಯಲ್ಲಿ ಹೋಗುತ್ತಿದ್ದಾಗ ಪೊಲೀಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ಸದರಿ ದಾಖಲೆಗಳಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ ಹಾಗೂ ಸದರಿ ದಾಖಲೆಗಳಿಗೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ6, 7 ರಲ್ಲಿ ತನ್ನ ಇರುವಿಕೆಯನ್ನು ಗುರುತಿಸಿದರು, ಸದರಿ ಪೋಟೋಗಳನ್ನು ಯಾವ ವಿಚಾರಕ್ಕೆ ತೆಗೆದರು ಎಂದು ನನಗೆ ಗೊತ್ತಿಲ್ಲ.

**(**ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ**,** ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು**)**

ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ದಿಃ24.05.2019 ರಂದು ಪೊಲೀಸರು ಅಪಘಾತದ ವಿಚಾರಕ್ಕೆ ಮಹಜರಿಗೆ ಸಹಕರಿಸಿ ಎಂದು ನನಗೆ ಮತ್ತು ಚಾಸಾ 2 ರವರಿಗೆ ಪರಿಚಯ ಮಾಡಿಕೊಂಡು ನಿಪಿ3 ರಂತೆ ನೋಟೀಸು ಜಾರಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾವು ಒಪ್ಪಿದ ನಂತರ ಅದೇ ದಿನ ನನ್ನ ಮತ್ತು ಚಾಸಾ 2 ರವರ ಸಮಕ್ಷಮ ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ಬೆಳಗ್ಗೆ 10.30 ರಿಂದ 11.15 ರ ವರೆಗೂ ನಿಪಿ 4 ರಂತೆ ಮಹಜರ್ ಮಾಡಿದರು ಎಂದರೆ ಸರಿಯಲ್ಲ. ನಂತರ ಅಲ್ಲಿಂದ ನಾವು ಠಾಣೆಗೆ ಹೋಗಿದ್ದು, ಅಲ್ಲಿ ಠಾಣಾ ಆವರಣದಲ್ಲಿ ನಮ್ಮ ಸಮಕ್ಷಮ ಬೈಕ್ ಸಂ.ಕೆಎ 66 ಹೆಚ್ 7929 ಮತ್ತು ಕಾರು ಸಂಖ್ಯೆ ಕೆಎ 44/8717 ಹಾಗೂ 4 ಚಕ್ರದ ಮರ/ಕಬ್ಬಿಣ ತಳ್ಳುವ ಗಾಡಿಯನ್ನು ಬೆಳಗ್ಗೆ 11.30 ರಿಂದ 12 ಗಂಟೆಯ ತನಕ ನಿಪಿ 5 ರಂತೆ ಮಹಜರ್ ಮಾಡಿ ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ಈ ಕೇಸಿನ ಎಲ್ಲಾ ವಿಚಾರಗಳು ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿ ಪರ ವಕೀಲರಿಂದ ಃಇಲ್ಲ
ಮರು ವಿಚಾರಣೆ ಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಒ,

ಸಹಿ/-
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.